# Bangalore
# Regional News
# 22.01.2025 / 2.30 p.m.
## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ರಾಜ್ಯದ ವಿವಿಧೆಡೆ ರಸ್ತೆ ಅಪಘಾತದಲ್ಲಿ 15 ಮಂದಿ ಸಾವು; ಸಾವನ್ನಪ್ಪಿದವರ ಕುಟುಂಬಕ್ಕೆ ತಲಾ 3 ಲಕ್ಷ ಪರಿಹಾರ ಘೋಷಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
2. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್‌ಗಳಿಗೆ ಕಡಿವಾಣ ಹಾಕಲು ಸರ್ಕಾರ ನಿರ್ಧಾರ
3. ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ದೇಶ, ಪರಿಸರದ ಒಳಿತಿಗೆ ಬಳಸಿಕೊಳ್ಳುವಂತೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಕರೆ
4. ಬೆಂಗಳೂರಿನಲ್ಲಿ ಬಿಜೆಪಿ ಕೋರ್ ಕಮಿಟಿ ಸಭೆ – ಪಕ್ಷ ಸಂಘಟನೆ ಕುರಿತಂತೆ ಚರ್ಚೆ
5. ಬೇಟಿ ಬಚಾವೋ, ಬೇಟಿ ಪಡಾವೋ ಯೋಜನೆಗೆ 10 ವರ್ಷ; ಬಳ್ಳಾರಿಯಲ್ಲಿ ವಿದ್ಯಾರ್ಥಿನಿಯರಿಂದ ಸೈಕಲ್ ಜಾಥಾ

******************

ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನ ಅರಬೈಲ್ ಬಳಿ ತರಕಾರಿ ತುಂಬಿದ್ದ ಲಾರಿ ಪಲ್ಟಿಯಾಗಿ ಸಾವನ್ನಪ್ಪಿದ್ದವರ ಸಂಖ್ಯೆ 10ಕ್ಕೆ ಏರಿಕೆಯಾಗಿದೆ. ಗಂಭೀರವಾಗಿ ಗಾಯಗೊಂಡಿರುವ 12 ಮಂದಿ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಉತ್ತರಕನ್ನಡ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಎನ್. ನಾರಾಯಣ ತಿಳಿಸಿದ್ದಾರೆ.

ಈ ಕುರಿತು ಒಂದು ವರದಿ;

ಧ್ವನಿ: ದೀಪಕ್, ವರದಿಗಾರ

ಘಟನೆಯ ಕುರಿತು ಯಲ್ಲಾಪುರ ಶಾಸಕ ಶಿವರಾಮ್ ಹೆಬ್ಬಾರ್ ಸಂತಾಪ ಸೂಚಿಸಿದ್ದಾರೆ.

ಇನ್ನೊಂದೆಡೆ, ಸಿಂಧನೂರು ತಾಲೂಕಿನ ಅರಗಿನಮರ ಕ್ಯಾಂಪ್ ಬಳಿ ಇಂದು ಬೆಳಗ್ಗೆ ಕ್ರೂಷರ್ ವಾಹನದ ಟೈರ್ ಸ್ಫೋಟಗೊಂಡು ಪಲ್ಟಿ ಹೊಡೆದ ಪರಿಣಾಮ ಚಾಲಕ ಸೇರಿದಂತೆ ನಾಲ್ವರು ಮೃತಪಟ್ಟಿದ್ದಾರೆ. ಮೃತಪಟ್ಟವರಲ್ಲಿ ಮೂವರು ಮಂತ್ರಾಲಯದ ಸಂಸ್ಕೃತ ವಿದ್ಯಾಪೀಠದ ವಿದ್ಯಾರ್ಥಿಗಳಾಗಿದ್ದಾರೆ.

ಮತ್ತೊಂದೆಡೆ, ಗೂಡ್ಸ್ ವಾಹನ ಮಗುಚಿ ಓರ್ವ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿ, 14ಕ್ಕೂ ಹೆಚ್ಚು ಜನರಿಗೆ ಗಂಭೀರ ಗಾಯವಾಗಿರುವ ಘಟನೆ ಮಂಡ್ಯದ ಕೆ.ಆರ್.ಪೇಟೆ ತಾಲೂಕಿನ ಹುಬ್ಬನಹಳ್ಳಿ ಗ್ರಾಮದ ಬಳಿ ನಡೆದಿದೆ. ಈ ಪೈಕಿ ನಾಲ್ವರ ಸ್ಥಿತಿ ಚಿಂತಾಜನಕವಾಗಿದ್ದು, ಗಾಯಾಳುಗಳನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ಹಾಗೂ ರಾಯಚೂರು ಜಿಲ್ಲೆಯ ಸಿಂಧನೂರಿನಲ್ಲಿ ಸಂಭವಿಸಿದ ಎರಡು ಪ್ರತ್ಯೇಕ ಅಪಘಾತಗಳಲ್ಲಿ ಮೃತಪಟ್ಟವರ ಕುಟುಂಬಗಳಿಗೆ ತಲಾ 3 ಲಕ್ಷ ರೂಪಾಯಿ ಪರಿಹಾರ ನೀಡಲು ಸರ್ಕಾರ ನಿರ್ಧರಿಸಿದೆ. ಅಪಘಾತದಲ್ಲಿ ಗಾಯಗೊಂಡವರ ಉಚಿತ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

ಭೀಕರ ಅಪಘಾತಗಳಲ್ಲಿ 14 ಮಂದಿ ಸಾವನ್ನಪ್ಪಿರುವ ಸುದ್ದಿ ಕೇಳಿ ತೀವ್ರ ಆಘಾತ ಉಂಟಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಸಾವನ್ನಪ್ಪಿದವರ ಕುಟುಂಬಕ್ಕೆ ನೋವು ಭರಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಹೇಳಿದ್ದಾರೆ.

ಯಲ್ಲಾಪುರದಲ್ಲಿ ಸಂಭವಿಸಿದ ಅಪಘಾತದಲ್ಲಿ ಹಾವೇರಿ ಜಿಲ್ಲೆಯ ಸವಣೂರು ತಾಲೂಕಿನ ಹತ್ತು ಜನ ನಿಧನ ಹೊಂದಿರುವ ಸುದ್ದಿ ಆಘಾತ ನೀಡಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಸಂತಾಪ ಸೂಚಿಸಿದ್ದಾರೆ.

ಗಾಯಗೊಂಡವರ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸುವುದರ ಜೊತೆಗೆ ಘಟನೆಯ ಬಗ್ಗೆ ಸಮಗ್ರ ತನಿಖೆ ನಡೆಸಬೇಕು ಎಂದು ತಿಳಿಸಿದ್ದಾರೆ.

*****************

ರಾಜ್ಯದಲ್ಲಿ ಮೈಕ್ರೋಫೈನಾನ್ಸ್‌ಗಳಿಗೆ ಕಡಿವಾಣ ಹಾಕಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.
ಸಿದ್ದಗಂಗಾ ಮಠಕ್ಕೆ ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಕ್ರೋ ಫೈನಾನ್ಸ್‌ಗಳು ಸರ್ಕಾರದ ಮಾರ್ಗದರ್ಶನಗಳನ್ನು ಉಲ್ಲಂಘನೆ ಮಾಡುತ್ತಿದ್ದು, ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ಮೈಕ್ರೋ ಫೈನಾನ್ಸ್ ನಿಂದ ಕಿರುಕುಳ ಅನುಭವಿಸುತ್ತಿರುವವರು ಪೊಲೀಸ್ ಠಾಣೆಗೆ ದೂರು ನೀಡುವಂತೆ ತಿಳಿಸಿದ್ದಾರೆ.
ಇದೇ ವೇಳೆ, ತ್ರಿವಿಧ ದಾಸೋಹಿ ಡಾ.ಶಿವಕುಮಾರಸ್ವಾಮೀಜಿ ಅವರ ಹುಟ್ಟೂರು ವೀರಾಪುರದಲ್ಲಿ ನಿರ್ಮಾಣವಾಗುತ್ತಿರುವ ಸ್ಮಾರಕಕ್ಕೆ ಅಗತ್ಯ ಅನುದಾನವನ್ನು ಬಜೆಟ್‌ನಲ್ಲಿ ಒದಗಿಸಲು ಮುಖ್ಯಮಂತ್ರಿಗೆ ಮನವಿ ಮಾಡುವುದಾಗಿ ಅವರು ಭರವಸೆ ನೀಡಿದ್ದಾರೆ.
ಧ್ವನಿ: ಡಾ.ಜಿ.ಪರಮೇಶ್ವರ್

*****************

ಶಿವಮೊಗ್ಗ ಜಿಲ್ಲೆಯ ಭದ್ರಾವತಿ ಆಕಾಶವಾಣಿ ಕೇಂದ್ರಕ್ಕೆ ಈಗ 60 ರ ಸಂಭ್ರಮ. ಈ ಕೇಂದ್ರದ ಸಾಮರ್ಥ್ಯ ಹೆಚ್ಚಿಸಲು ಕೇಂದ್ರ ಸರ್ಕಾರ ಮುಂದಾಗಿದ್ದು, ಈಗ ಇರುವ ಮೀಡಿಯಂ ವೇವ್, ಫ್ರೀಕ್ವೆನ್ಸಿ ಮಾಡ್ಯುಲೇಷನ್ ಟ್ರಾನ್ಸ್ ಮಿಷನ್ ಗೆ ಅಂದರೆ ಎಫ್.ಎಂಗೆ ಬದಲಾಗುತ್ತಿದೆ. ಕೇಂದ್ರದ ಮಾಹಿತಿ ಮತ್ತು ಪ್ರಸರಣ ಸಚಿವಾಲಯ 10 ಕೋಟಿ ವೆಚ್ಚದಲ್ಲಿ 10 ಕಿಲೋ ವ್ಯಾಟ್ ಸಾಮರ್ಥ್ಯದ ತರಂಗಾಂತರ ಅಳವಡಿಸಲು ಮುಂದಾಗಿದೆ. ಈಗಾಗಲೇ ಕೆನಡಾದಿಂದ 10 ಕಿಲೋವ್ಯಾಟ್ ಸಾಮರ್ಥ್ಯದ ಟ್ರಾನ್ಸ್ ಮೀಟರ್ ಶಿವಮೊಗ್ಗಕ್ಕೆ ಆಗಮಿಸಿದೆ. ಕೇಂದ್ರದ ಮಾಹಿತಿ ಮತ್ತು ಪ್ರಸರಣಾ ಖಾತೆ ರಾಜ್ಯ ಸಚಿವ ಡಾ: ಎಲ್ ಮುರುಗನ್ ನಾಳೆ ಲೋಕಾರ್ಪಣೆಗೊಳಿಸಲಿದ್ದಾರೆ.

*****************

ವಿದ್ಯಾರ್ಥಿಗಳು ಗಳಿಸಿದ ಜ್ಞಾನವನ್ನು ತಮ್ಮ ವೈಯಕ್ತಿಕ ಬೆಳವಣಿಗೆಗೆ ಮಾತ್ರವಲ್ಲದೆ, ಸಮಾಜ, ದೇಶ ಮತ್ತು ಪರಿಸರದ ಒಳಿತಿಗಾಗಿ ಬಳಸಿಕೊಳ್ಳಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ ನೀಡಿದ್ದಾರೆ.
ಕುವೆಂಪು ವಿಶ್ವವಿದ್ಯಾಲಯದ 34ನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು,
ತಂತ್ರಜ್ಞಾನ, ನಾವೀನ್ಯತೆ ಮತ್ತು ಸುಸ್ಥಿರತೆಯ ಯುಗದಲ್ಲಿ ಜೀವಿಸುತ್ತಿರುವ ಯುವ ಪೀಳಿಗೆ ಕೊಡುಗೆಯು ಮಾನವಕುಲಕ್ಕೆ ಹೊಸ ದಿಕ್ಕನ್ನು ನೀಡಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ನಿಮಗೆ ಮಾರ್ಗದರ್ಶನ ಮಾಡಿದ ಪೋಷಕರು, ಶಿಕ್ಷಕರು ಮತ್ತು ಈ ವಿಶ್ವವಿದ್ಯಾಲಯಕ್ಕೆ ಯಾವಾಗಲೂ ಕೃತಜ್ಞರಾಗಿರುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದ್ದಾರೆ.

*****************

ಬೆಂಗಳೂರಿನ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಉಸ್ತುವಾರಿ ಬಿಜೆಪಿ ರಾಧಾ ಮೋಹನ್ ದಾಸ್ ಅಗರ್ ವಾಲ್ ಹಾಗೂ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಕೋರ್ ಕಮಿಟಿ ಸಭೆ ನಡೆಯಿತು.

ಸಭೆಯಲ್ಲಿ ಪಕ್ಷ ಸಂಘಟಿಸುವ ಬಗ್ಗೆ ವಿಸ್ತೃತವಾಗಿ ಚರ್ಚಿಸಲಾಗಿದೆ ಎಂದು ಪರಿಷತ್ ಸದಸ್ಯ ಸಿ.ಟಿ.ರವಿ ತಿಳಿಸಿದ್ದಾರೆ. ಸಂಘಟನಾತ್ಮಕವಾಗಿ ಪಕ್ಷವನ್ನು ಬಲಗೊಳಿಸುವ ದೃಷ್ಟಿಯಲ್ಲಿ ಮತ್ತು ವರ್ತಮಾನದ ರಾಜಕಾರಣದ ಕುರಿತು ಸಭೆಯಲ್ಲಿ ಚರ್ಚೆ ನಡೆಸಲಾಗಿದೆ ಎಂದು ಅವರು ಹೇಳಿದ್ದಾರೆ.

ಧ್ವನಿ: ಸಿ.ಟಿ.ರವಿ

*****************

ಹೆಣ್ಣು ಮಕ್ಕಳ ಉಜ್ವಲ ಭವಿಷ್ಯಕ್ಕೆ ಪ್ರಧಾನಿ ನರೇಂದ್ರ ಮೋದಿಯವರು ಆರಂಭಿಸಿರುವ ಬೇಟಿ ಬಚಾವೋ, ಬೇಟಿ ಪಡಾವೋ ಯೋಜನೆಗೆ ಇಂದು ಹತ್ತು ವರ್ಷ.

ದೇಶದಲ್ಲಿ ಕುಸಿಯುತ್ತಿರುವ ಮಕ್ಕಳ ಲಿಂಗಾನುಪಾತ ಮತ್ತು ಲಿಂಗ ಅಸಮಾನತೆಯ ಸಮಸ್ಯೆಗೆ ಉತ್ತರವಾಗಿ 2015ರ ಜನವರಿ 22 ರಂದು ಹರಿಯಾಣದ ಪಾಣಿಪತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಈ ಯೋಜನೆಗೆ ಚಾಲನೆ ನೀಡಿದ್ದರು.

ಗಣಿನಾಡು ಬಳ್ಳಾರಿಯಲ್ಲಿ ಶಾಲಾ ಮಕ್ಕಳಿಂದ "ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆ, ಭದ್ರತೆ ಮತ್ತು ಸಬಲೀಕರಣಕ್ಕಾಗಿ" ಸೈಕಲ್ ಜಾಥಾ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಂಯುಕ್ತವಾಗಿ ಹಮ್ಮಿಕೊಂಡಿದ್ದ ಈ ಜಾಥಾಗೆ ಬಳ್ಳಾರಿ ಜಿಲ್ಲಾ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶ ರಾಜೇಶ್ ಹೊಸಮನಿ ಚಾಲನೆ ನೀಡಿದರು.

ಹೆಣ್ಣು ಭ್ರೂಣ ಹತ್ಯೆ ನಿಲ್ಲಬೇಕು, ಹೆಣ್ಣು ಗಂಡು ಭೇದ ಬೇಡ ಸಮನಾಗಿ ಕಾಣಿರಿ, ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಸೇರಿದಂತೆ, ಹಲವು ನಾಮಫಲಕಗಳನ್ನು ಹಿಡಿದ ವಿದ್ಯಾರ್ಥಿನಿಯರ ಸೈಕಲ್ ಜಾಥಾ ನಗರದ ಪ್ರಮುಖ ಬೀದಿಗಳಲ್ಲಿ ಸಾಗಿತು.

******************

ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ಚಾರ್ಮಾಡಿ ಘಾಟ್‌ನ ಬಿದಿರುತಳ ಅರಣ್ಯ ಪ್ರದೇಶದಲ್ಲಿ ಕಾಡ್ಗಿಚ್ಚಿನಿಂದಾಗಿ ಸಾಕಷ್ಟು ಅರಣ್ಯ ಪ್ರದೇಶ ನಾಶವಾಗಿದೆ. ಕಾಡ್ಗಿಚನ್ನು ಹತೋಟಿಗೆ ತರಲಾಗಿದೆ ಎಂದು ಮೂಡಿಗೆರೆ ವಲಯ ಅರಣ್ಯಧಿಕಾರಿ ಚರಣ್ ಕುಮಾರ್ ತಿಳಿಸಿದ್ದಾರೆ.

ಕಳೆದ ಎರಡು ದಿನಗಳಿಂದ ಈ ಭಾಗದಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ಅರಣ್ಯ ಇಲಾಖೆ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ಹತೋಟಿಗೆ ತಂದಿದ್ದಾರೆ.

ಅರಣ್ಯ ಪ್ರದೇಶದಲ್ಲಿ ಜನರು ಅಡುಗೆ ಮಾಡಬಾರದು ಧೂಮಪಾನ ಮಾಡಬಾರದು ಎಂದು ಅವರು ಮನವಿ ಮಾಡಿದ್ದಾರೆ.

******************

<u>ಸಂಕ್ಷಿಪ್ತ ಸುದ್ದಿಗಳು</u>

1. ತುಮಕೂರು ಹಾಲು ಉತ್ಪಾದಕರ ಸಂಘದ ಅಧ್ಯಕ್ಷರಾಗಿ ಪಾವಗಡ ಶಾಸಕ ಹೆಚ್.ವಿ.ವೆಂಕಟೇಶ್ ಆಯ್ಕೆಯಾಗಿದ್ದಾರೆ. ಅವರು 9 ಮತಗಳಿಂದ ಎಸ್.ಆರ್.ಗೌಡ ವಿರುದ್ಧ ಜಯಗಳಿಸಿದ್ದಾರೆ.
2. ಹಾವೇರಿ ತಾಲ್ಲೂಕು ದೇವಿಹೊಸೂರಿನಲ್ಲಿರುವ ತೋಟಗಾರಿಕಾ ಅಭಿಯಾಂತ್ರಿಕ ಮತ್ತು ಆಹಾರ ತಂತ್ರಜ್ಞಾನ ಮಹಾವಿದ್ಯಾಲಯದಲ್ಲಿ ಇಂದಿನಿಂದ ಇದೇ 24ರ ವರೆಗೆ ಆಹಾರ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಇತ್ತೀಚಿನ ಪ್ರಗತಿ ಹಾಗೂ ಮುನ್ನಡೆ ಕುರಿತು ಅಂತಾರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗಿದೆ.
3. ದೈನಂದಿನ ಆಹಾರ ಸೇವನೆಯಲ್ಲಿ ಸಿರಿಧಾನ್ಯಗಳನ್ನು ಬಳಸುವುದರಿಂದ ಹಲವು ರೋಗಗಳಿಂದ ಮುಕ್ತವಾಗಿ ಆರೋಗ್ಯಯುತ ಜೀವನ ನಡೆಸಬಹುದು ಎಂದು ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ತಿಳಿಸಿದ್ದಾರೆ.

*********ಮುಕ್ತಾಯ*********